ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು):– ಮಾನ್ಯ ಅಧ್ಯಕ್ಷರೆ, ಮಾನ್ಯ ಸಚಿವರು ಉತ್ತರವನ್ನು ಕೊಟ್ಟಿದ್ದಾರೆ. ಕಳೆದ ನಾಲ್ಕು ವರ್ಷಗಳಿಂದ ನಡೆಯುತ್ತಿರುವ ಸರ್ಕಾರಿ ಪ್ರೌಢಶಾಲೆ ಬಂದ್ ಆಗಿದೆಯೆಂದು ಹೇಳಿ. ಇದನ್ನು ಪರಿಶೀಲಿಸುತ್ತೇವೆಂದು ಹೇಳಿದ್ದಾರೆ. ಆದಷ್ಟು ಬೇಗ ಅದನ್ನು ಪ್ರಾರಂಭ ಮಾಡುವುದಕ್ಕೆ ಕ್ರಮ ತೆಗೆದುಕೊಳ್ಳಬೇಕೆಂದು ವಿನಂತಿ ಮಾಡಿಕೊಳ್ಳುತ್ತಿದ್ದೇನೆ.

ಶ್ರೀ ಟಿ.ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ಪರಿಶೀಲನೆ ಮಾಡುತ್ತೇವೆಂದು ಹೇಳಿದ್ದೇವೆ. ಅದನ್ನು ಪ್ರಾರಂಭ ಮಾಡುವುದಕ್ಕೆ ಎಲ್ಲ ಪ್ರಯತ್ನಗಳನ್ನು ಮಾಡಿಸಿಕೊಡುತ್ತೇನೆ.

2. ವಿಷಯ: ನೂತನವಾಗಿ ರಚನೆಯಾಗಿರುವ ಗ್ರಾಮ ಪಂಚಾಯತಿಗಳಿಗೆ ಕಟ್ಟಡ ಹಾಗೂ ಸಿಬ್ಬಂದಿಗಳ ಕೊರತೆಯಿಂದ ಆಡಳಿತಾತ್ಮಕವಾಗಿ ತೊಂದರೆಯಾಗಿರುವ ಬಗ್ಗೆ.

ಶ್ರೀ ವಿ. ಸುನಿಲ್‌ಕುಮಾರ್ (ಕಾರ್ಕಳ):– ಮಾನ್ಯ ಅಧ್ಯಕ್ಷರೆ, ನೂತನವಾಗಿ ರಚನೆಯಾಗಿರುವ ಗ್ರಾಮ ಪಂಚಾಯತಿಗಳಿಗೆ ಕಟ್ಟಡ ಹಾಗೂ ಸಿಬ್ಬಂದಿಗಳ ಕೊರತೆಯಿಂದ ಆಡಳಿತಾತ್ಮಕವಾಗಿ ತೊಂದರೆಯಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುತ್ತೇನೆ.

ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರು):– ಮಾನ್ಯ ಅಧ್ಯಕ್ಷರೆ, ರಾಜ್ಯದಲ್ಲಿ ಈಗಿರುವ ಒಟ್ಟು ಗ್ರಾಮ ಪಂಚಾಯತಿಗಳ ಸಂಖ್ಯೆ: 6014, ರಾಜ್ಯದಲ್ಲಿ ಶ್ರೀ ಎಸ್.ಜಿ. ನಂಜಯ್ಯನ ಮಠ, ಮಾಜಿ ಶಾಸಕರು ಇವರ ನೇತೃತ್ವದಲ್ಲಿ ಹಾಗೂ ಇತರೆ ತಜ್ಞರನ್ನೊಳಗೊಂಡ ಸಮಿತಿಯ ವರದಿಯ ಶಿಫಾರಸ್ಸಿನಂತೆ, ಹೆಚ್ಚುವರಿಯಾಗಿ ಗ್ರಾಮ ಪಂಚಾಯತ್‌ಗಳನ್ನು ರಚಿಸಲಾಗಿದೆ. ಹೊಸದಾಗಿ ಸೃಜಿಸಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ: 449.

ಹೊಸದಾಗಿ ರಚಿತವಾಗಿರುವ ಗ್ರಾಮ ಪಂಚಾಯತಿಗಳಿಗೆ ತಾತ್ಕಾಲಿಕವಾಗಿ ಸಿಬ್ಬಂದಿ, ಕೊಠಡಿ ಹಾಗೂ ಪೀಠೋಪಕರಣಗಳ ವ್ಯವಸ್ಥೆ ಕಲ್ಪಿಸುವ ಬಗ್ಗೆ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ದಿನಾಂಕ: 18–05–2015 ರ ಸರ್ಕಾರದ ಪತ್ರದಲ್ಲಿ ಈ ಕೆಳಕಂಡಂತೆ ನಿರ್ದೇಶನ ನೀಡಲಾಗಿದೆ.

1. ಹೊಸದಾಗಿ ರಚಿತವಾಗಿರುವ ಗ್ರಾಮ ಪಂಚಾಯತಿಗಳಿಗೆ ಅಕ್ಕ–ಪಕ್ಕದ ಗ್ರಾಮ ಪಂಚಾಯತಿಗಳಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–1 ಮತ್ತು ಗ್ರೇಡ್–2 ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರನ್ನು ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1957 ರ ನಿಯಮ 68 ರಡಿ ಹೆಚ್ಚುವರಿ ಪ್ರಭಾರದಲ್ಲಿರಿಸುವುದು.
2. ಪ್ರಸ್ತುತ ಹಾಲಿ ಇರುವ ಗ್ರಾಮ ಪಂಚಾಯತಿಯನ್ನು ವಿಭಜಿಸಿ, ಪ್ರತ್ಯೇಕವಾಗಿ ಹೊಸದಾಗಿ ಗ್ರಾಮ ಪಂಚಾಯತಿಯಾಗಿ ರಚಿಸಿರುವುದರಿಂದ ಹಾಲಿ ಇರುವ ಗ್ರಾಮ ಪಂಚಾಯತಿಯಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 112 ಮತ್ತು 113 ರಂತೆ ಗ್ರಾಮ ಪಂಚಾಯತಿಗಳು ನೇಮಿಸಿಕೊಂಡ ಸಿಬ್ಬಂದಿಗಳು (ಬಿಲ್ ಕಲೆಕ್ಟರ್, ಕ್ಲರ್ಕ್/ಡಾಟಾ ಎಂಟ್ರಿ ಆಪರೇಟರ್, ವಾಟರ್‌ಮೆನ್, ಜವಾನ ಮತ್ತು ಸ್ವಚ್ಛತಾಗಾರರು) ಹೆಚ್ಚುವರಿಯಾಗಿದ್ದಲ್ಲಿ ಹೊಸದಾಗಿ ರಚನೆಯಾದ ಗ್ರಾಮ ಪಂಚಾಯತಿಗೆ ಮರು ಹೊಂದಾಣಿಕೆ ಮೂಲಕ ನೇಮಿಸಲು ಕ್ರಮ ವಹಿಸುವುದು.
3. ಕ್ರಮ ಸಂಖ್ಯೆ:3 ರಲ್ಲಿ ತಿಳಿಸಿರುವಂತೆ ನೌಕರರು ಲಭ್ಯವಿಲ್ಲದಿದ್ದಲ್ಲಿ ಹೊಸದಾಗಿ ರಚನೆಯಾಗಿರುವ ಗ್ರಾಮ ಪಂಚಾಯತಿಗೆ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲು ಸರ್ಕಾರವು ದಿನಾಂಕ: 10–09–2014 ರಂದು ಹೊರಡಿಸಿರುವ ಆದೇಶದಂತೆ ಸಂಬಂಧಪಟ್ಟ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮ ವಹಿಸುವುದು.

4. ಹೊಸದಾಗಿ ರಚನೆಯಾಗಿರುವ ಗ್ರಾಮ ಪಂಚಾಯತಿಗಳ ಕಛೇರಿಗೆ ಸರ್ಕಾರಿ ಕೊಠಡಿಗಳಾದ ಹೆಚ್ಚುವರಿ ಶಾಲಾ ಕೊಠಡಿ, ಅಂಗನವಾಡಿ ಕೊಠಡಿ, ಇನ್ನಿತರೆ ಸರ್ಕಾರಿ ಕಛೇರಿಗಳ ಕೊಠಡಿಗಳಲ್ಲಿ ಸ್ಥಳಾವಕಾಶ ಕಲ್ಪಿಸುವುದು. ಒಂದು ವೇಳೆ ಸರ್ಕಾರಿ ಕೊಠಡಿಗಳು ಲಭ್ಯವಿಲ್ಲದಿದ್ದಲ್ಲಿ ನಿಯಮಾನುಸಾರ ಬಾಡಿಗೆ ಕೊಠಡಿಗಳಲ್ಲಿ ಸ್ಥಳಾವಕಾಶ ಕಲ್ಪಿಸುವುದು.
5. ಹೊಸ ಗ್ರಾಮ ಪಂಚಾಯತಿ ಕಛೇರಿಗೆ ಪೀಠೋಪಕರಣಗಳು, ಗಣಕಯಂತ್ರ ಸಂಬಂಧಿ ಸಾಧನಗಳನ್ನು ಜಿಲ್ಲಾ ಪಂಚಾಯತಿ ಕಛೇರಿಯಲ್ಲಿ ಲಭ್ಯವಿರುವ ಅನುದಾನದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪಾರದರ್ಶಕತೆ ಅಧಿನಿಯಮ, 1999 ಮತ್ತು ನಿಯಮಗಳು, 2000 ರನ್ವಯ ಖರೀದಿಸಲು ಕ್ರಮ ವಹಿಸುವುದು.

ಪ್ರತಿ ಗ್ರಾಮ ಪಂಚಾಯತಿ ಕಛೇರಿ ಕಟ್ಟಡ ನಿರ್ಮಾಣ ಮಾಡಲು ರೂ. 20.00 ಲಕ್ಷ, ಪ್ರತಿ ಗ್ರಾಮ ಪಂಚಾಯತಿಗೆ ಶಾಸನಬದ್ಧ ಅನುದಾನವಾಗಿ ಸರಾಸರಿ 10–12 ಲಕ್ಷ ಹಾಗೂ ಪೀಠೋಪಕರಣ, ಕಂಪ್ಯೂಟರ್ ಮತ್ತು ಇತರೆ ಸಾಮಗ್ರಿಗಳ ಖರೀದಿ ಹಾಗೂ ಕಛೇರಿಯ ಸ್ಥಾಪನೆಯ ವೆಚ್ಚವನ್ನೊಳಗೊಂಡಂತೆ ಅನುದಾನ ಒದಗಿಸುವಂತೆ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ರಾಜ್ಯದಲ್ಲಿ ಹೊಸದಾಗಿರುವ ಸೃಜಿಸಲಾಗಿರುವ ಪ್ರತಿ ಗ್ರಾಮ ಪಂಚಾಯತಿಗೆ ಒಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಹುದ್ದೆ ಹಾಗೂ ಹೆಚ್ಚಿನ ಆಡಳಿತಾತ್ಮಕ ಮತ್ತು ಆರ್ಥಿಕ ಜವಾಬ್ದಾರಿಯುಳ್ಳ ಗ್ರಾಮ ಪಂಚಾಯತಿಗೆ ಒಂದು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಯನ್ನು ಸೃಜಿಸಲಾಗಿದೆ.

ಶ್ರೀ ವಿ. ಸುನಿಲ್‌ಕುಮಾರ್:– ಮಾನ್ಯ ಅಧ್ಯಕ್ಷರೆ, ಉತ್ತರವನ್ನು ಕೊಟ್ಟಿದ್ದಾರೆ. ಇದರಲ್ಲಿ ನನ್ನದು ಎರಡೇ ಎರಡು clarification ಕೇಳುವುದಿದೆ. ಮೊದಲನೆಯದಾಗಿ, 20 ಲಕ್ಷ ರೂ.ಗಳ ಅನುದಾನವನ್ನು ಕೊಡುವುದಕ್ಕೆ ನಾವು ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಕೊಟ್ಟಿದ್ದೇವೆಂದು ಹೇಳಿದ್ದೀರಿ. ನೀವು ತಕ್ಷಣ ಆರ್ಥಿಕ ಇಲಾಖೆಯಿಂದ ಅನುಮೋದನೆಯನ್ನು ತೆಗೆದುಕೊಂಡು

ಯಾವಾಗ ಬಿಡುಗಡೆ ಮಾಡುತ್ತೀರಿ? ಏಕೆಂದರೆ ಇದನ್ನು ಮತ್ತೆ delay ಮಾಡುತ್ತಾ ಹೋದರೆ ಬಹಳ ದೊಡ್ಡ ಪ್ರಮಾಣದಲ್ಲಿ ಹೊಸ ಪಂಚಾಯತಿಗಳಿಗೆ ಸಮಸ್ಯೆಯಾಗುತ್ತದೆ. ಇನ್ನು ಎರಡನೆಯದಾಗಿ ಖಾಲಿಯಿರುವಂಥ ಹುದ್ದೆಗಳಲ್ಲಿ ಈಗಾಗಲೇ PDO ಹುದ್ದೆಗಳು ಮತ್ತು ಸೆಕ್ರೆಟರಿ ಹುದ್ದೆಗಳು ಖಾಲಿಯಿವೆ. ನೀವು deputation ಮುಖಾಂತರ ತೆಗೆದುಕೊಳ್ಳಬೇಕೆಂದು ಹೇಳಿದ್ದೀರಿ. ಖಾಲಿಯಿರುವಂಥ ಹುದ್ದೆಗಳನ್ನು ಯಾವಾಗ ತುಂಬುತ್ತೀರಿ ಎಂಬ ಬಗ್ಗೆ ಸ್ಪಷ್ಟಪಡಿಸಬೇಕು.

ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):– ಮಾನ್ಯ ಅಧ್ಯಕ್ಷರೆ, 20 ಲಕ್ಷ ರೂಪಾಯಿ ಪ್ರತಿ ಗ್ರಾಮ ಪಂಚಾಯಿತಿಗೆ ಶಾಸನಬದ್ಧ ಅನುದಾನ ಕೊಡುವುದು ಏನಿದೆ ಅದನ್ನು ಅತೀ ಶೀಘ್ರವಾಗಿ ಇದೇ ತಿಂಗಳಿನಲ್ಲಿ ಒದಗಿಸುವ ಪ್ರಯತ್ನ ಮಾಡುತ್ತೇವೆ. ಎರಡನೆಯದಾಗಿ ಕಾರ್ಯದರ್ಶಿಗಳನ್ನು ಒದಗಿಸುವಂತಹ ಕೆಲಸವನ್ನು ನಾವು ಮಾಡಲೇಬೇಕಾಗುತ್ತದೆ. ಆ ಕೆಲಸವನ್ನು ನಾವು ಅತ್ಯಂತ ತೀವ್ರವಾಗಿ ಮಾಡಬೇಕು. ಬಹುಶಃ ಆಗಸ್ಟ್ 15ನೇ ತಾರೀಖಿನೊಳಗಾಗಿ ಕಾರ್ಯದರ್ಶಿಗೆ, ಅವರದೇ ಆದಂತಹ ಅಕೌಂಟ್, ಅವರಿಗೆ ಪೀಠೋಪಕರಣ, ಕಚೇರಿ ಹಾಗೂ ಅವರಿಗೆ ಪಿಡಿಓ ಬೇಕು. ಪಿಡಿಓ ಸೆಲೆಕ್ಷನ್ ಸಲುವಾಗಿ ಆ ಪ್ರಕ್ರಿಯೆಯನ್ನು Special Recruitment Rules ನಿಂದ ಪ್ರಾರಂಭ ಮಾಡಿದ್ದೇವೆ.

3. ವಿಷಯ: 2013–14ನೇ ಸಾಲಿನಲ್ಲಿ ಗದಗ ಜಿಲ್ಲೆಯಲ್ಲಿನ ಪ್ರೌಢ ಶಾಲೆಗಳಲ್ಲಿ ಆರ್.ಎಂ.ಎಸ್.ಎ ಯೋಜನೆಯಡಿ ಮಂಜೂರಾದ ಕಟ್ಟಡ ಕಾಮಗಾರಿಗಳು ಸಂಪೂರ್ಣ ಸ್ಥಗಿತಗೊಂಡಿರುವ ಬಗ್ಗೆ.

ಶ್ರೀ ಜಿ.ಎಸ್. ಪಾಟೀಲ್ (ರೋಣ):– ಮಾನ್ಯ ಅಧ್ಯಕ್ಷರೆ, 2013–14ನೇ ಸಾಲಿನಲ್ಲಿ ಗದಗ ಜಿಲ್ಲೆಯಲ್ಲಿನ ಪ್ರೌಢ ಶಾಲೆಗಳಲ್ಲಿ ಆರ್.ಎಂ.ಎಸ್.ಎ ಯೋಜನೆಯಡಿ ಮಂಜೂರಾದ ಕಟ್ಟಡ ಕಾಮಗಾರಿಗಳು ಸಂಪೂರ್ಣ ಸ್ಥಗಿತಗೊಂಡಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನವನ್ನು ಸೆಳೆಯಬಯಸುತ್ತೇನೆ.